# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 04-06-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ. ಅಧ್ಯಕ್ಷರು. ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು.
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ. ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು.
3. ಶಾಹೀನಾ. ವೈದ್ಯಾಧಿಕಾರಿಗಳ ಕಛೇರಿ. ವಾರ್ಡ್ ಸಂಖ್ಯೆ.29. ಕಾಚರಕನಹಳ್ಳಿ,
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು.
5. ಶ್ರೀಮತಿ ವಿನುತ. ಪದಾಧಿಕಾರಿಗಳು. ಹೆಚ್.ಆರ್.ಬಿ.ಆರ್. 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀಮತಿ ಸರಸ್ವತಿ. ಸದಸ್ಯರು. ಜಲವಾಯು ವಿಹಾರ್ ಅಸೋಸಿಯೇಷನ್(ರಿ)
7. ಶ್ರೀ ಪಿಳ್ಳಪ್ಪ (ಅಧ್ಯಕ್ಷರು. ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್. ಕಂದಾಯ ನಿರೀಕ್ಷಕರು.
2. ಶ್ರೀ ರಾಜೇಶ್. ಕಿರಿಯ ಆರೋಗ್ಯ ನಿರೀಕ್ಷಕರು.
3. ಸಂಗೀತಾ. ಇಂಜಿನಿಯರ್. ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ.
4. ಮಾರ್ಷಲ್. ವಾರ್ಡ್ ಸಂಖ್ಯೆ.29. ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀ ವಿನಯ್, ಸಹಾಯಕ ಅಭಿಯಂತರರು, ಬೀದಿ ದೀಪಗಳ ವಿಭಾಗ
8. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)** ರವರು ಮಾತನಾಡಿ, ವಾರ್ಡ್ ಪ್ರದೇಶದ ಬಿಡಿಎ ಬಡಾವಣೆಯಲ್ಲಿ ಬೀದಿ ದೀಪಗಳ ಕಂಬಗಳಿಗೆ ಡಿಪಿ ಸ್ವಿಚ್‌ಗಳಿರುವುದಿಲ್ಲ ಹಾಗೂ ಹಲವು ಕಡೆಗಳಲ್ಲಿ ಟೈಮರ್‌ಗಳು ದುರಸ್ತಿಯಲ್ಲಿರುತ್ತವೆ ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ, ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ಅಭಿಯಂತರರಿಗೆ ಕೂಡಲೇ ಡಿಪಿ ಸ್ವಿಚ್‌ಗಳನ್ನು ಅಳವಡಿಸಿ ಹಾಗೂ

ಯಾವುದೇ ಚಟುವಟಿಕೆಗಳು ಅಳವಡಿಸಿರುವ ಸಿಸಿ ಕ್ಯಾಮೆರಾಗಳಲ್ಲಿ ಸೆರೆಯಾಗಿರುವುದಿಲ್ಲ ಮತ್ತು ವಿದ್ಯುತ್ ದೀಪಗಳು ಉರಿಯುತ್ತಿದ್ದರೂ ಸಹ ರಸ್ತೆಯಲ್ಲಿ ಕತ್ತಲು ಆವರಿಸಿರುತ್ತದೆ. ಇದರಿಂದ ಅಪಘಾತ ಹಾಗೂ ಕಳ್ಳತನಗಳಾಗುವ ಸಂಭವವಿರುತ್ತದೆ. ಈಗಾಗಲೇ ಹಲವು ಕಡೆ ಮರಗಳಿಗೆ ಟ್ರಿಮ್ಮಿಂಗ್ ಮಾಡಲಾಗಿದ್ದು, ಇನ್ನೂ ಹಲವು ಕಡೆ ಟ್ರಿಮ್ಮಿಂಗ್ ಮಾಡುವುದು ಬಾಕಿ ಇರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ, ಸಿಸಿ ಕ್ಯಾಮೆರಾಗಳಿಗೆ ಹಾಗೂ ವಿದ್ಯುತ್ ದೀಪಗಳಿಗೆ ಅಡ್ಡಲಾಗಿರುವ ಮರದ ಕೊಂಬೆಗಳನ್ನು ಕತ್ತರಿಸಲು ಅರಣ್ಯ ವಿಭಾಗದ ಗಮನಕ್ಕೆ ತರಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

3) <u>ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ) ರವರು ಮಾತನಾಡಿ,</u> ವಾರ್ಡ್ ವ್ಯಾಪ್ತಿಯ ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ಪಾದಾಚಾರಿ ಮಾರ್ಗದ ಒತ್ತುವರಿ ತೆರವುಕಾರ್ಯಾಚರಣೆಯನ್ನು ಭಾಗಶಃ ಮಾಡಲಾಗಿದ್ದು, ಇನ್ನೂ ಬಾಕಿ ಇರುವ ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ಪಾದಾಚಾರಿ ಮಾರ್ಗದ ಒತ್ತುವರಿ ತೆರವು ಕಾರ್ಯಾಚರಣೆ ಕೈಗೊಂಡು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಸಭೆಗೆ ತಿಳಿಸಿದರು.

4) <u>**ಶಾಹೀನಾ, ವೈದ್ಯಾಧಿಕಾರಿಗಳ ಕಛೇರಿ, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ, ರವರು** ಮಾತನಾಡಿ,</u> ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಯಾವುದೇ ಪಾಸಿಟಿವ್ ಪ್ರಕರಣ ದೃಢಪಟ್ಟಿರುವುದಿಲ್ಲ, ಹಾಗೂ ಪ್ರಸ್ತುತ ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಫ್ರಂಟ್ ಲೈನ್ ಕಾರ್ಯಕರ್ತರಿಗೆ ಬೂಸ್ಟರ್ ಡೋಸ್ ನೀಡಲಾಗುತ್ತಿದ್ದು, ಈ ಸದಾವಕಾಶವನ್ನು ಬಳಿಸಿಕೊಳ್ಳಲು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna Kumar
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

<u>**ಪ್ರತಿಯನ್ನು**</u>

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.